ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಲೋಕೋಪಯೋಗಿ ಇಲಾಖೆಯ ರಸ್ತೆ, ಕಟ್ಟಡಗಳ ಅಭಿವೃದ್ಧಿಯ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

215 (227) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ರಸ್ತೆ ಮತ್ತು ಕಟ್ಟಡದ ಕಾಮಗಾರಿಗಳ ವರ್ಷವಾರು ಮಾಹಿತಿಯನ್ನು ಒದಗಿಸುವುದು;

(ಆ) ಈ ಅವಧಿಯಲ್ಲಿ ಜಿಲ್ಲೆಯಲ್ಲಿ ಎಷ್ಟು ಕಿ.ಮೀ. ರಸ್ತೆಯನ್ನು ಅಭಿವೃದ್ಧಿಪಡಿಸಲಾಗಿದೆ; ಅದರಲ್ಲಿ ಎಷ್ಟು ಕಿ.ಮೀ. ರಸ್ತೆಯನ್ನು ಹೊಸದಾಗಿ ನಿರ್ಮಿಸಲಾಯಿತು. ಹಾಗೂ ಎಷ್ಟು ಕಿ.ಮೀ. ರಸ್ತೆಯನ್ನು ಮೇಲ್ದರ್ಜೆಗೇರಿಸಲಾಯಿತು; (ಉದ್ದ ಮತ್ತು ಅಗಲದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಮೇಲ್ಕಂಡ ಪ್ರತಿ ಕಾಮಗಾರಿಗೆ ಪ್ರತಿ ವರ್ಷ ವೆಚ್ಚ ಮಾಡಲಾದ ಹಣವೆಷ್ಟು; ಈ ಪೈಕಿ ರಾಜ್ಯ ಸರ್ಕಾರದ ಮತ್ತು ಕೇಂದ್ರ ಸರ್ಕಾರಗಳಿಂದ ಭರಿಸಿದ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಈ) ಈ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು ಮತ್ತು ಕಾಮಗಾರಿಗಳನ್ನು ಎಷ್ಟು ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗಿದೆ; ಅಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ಒದಗಿಸುವುದು)